# ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು ಇವರ ನಡವಳಿಗಳು

**ವಿಷಯ:** 2016–17ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ಪೂರ್ವ/ನಂತರ ವಿದ್ಯಾರ್ಥಿನಿಲಯಗಳಿಗೆ ತಟ್ಟೆ–ಲೋಟ, ಪೀಠೋಪಕರಣ ಹಾಗೂ ಇತರೆ ಸಾಮಾಗ್ರಿಗಳನ್ನು ಖರೀದಿಸಲು ರಾಜ್ಯವಲಯ ಯೋಜನೆಯಿಂದ ಅನುದಾನ ಬಿಡುಗಡೆ ಮಾಡುವ ಕುರಿತು.

**ಉಲ್ಲೇಖ:**
1) ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 124 ಎಂಡಿಎಸ್ 2016 ದಿನಾಂಕ: 16.04.2016.
2) ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 124 ಎಂಡಿಎಸ್ 2016. ದಿನಾಂಕ: 03.05.2015.
3) ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ/ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರ ಕೋರಿಕೆ ಮೇರೆಗೆ

<><><>

**ಪ್ರಸ್ತಾವನೆ:–**

ಉಲ್ಲೇಖ(1)ರ ಸರ್ಕಾರ ಆದೇಶದಲ್ಲಿ 2015–16ನೇ ಸಾಲಿನ ಅನುಷ್ಠಾನಗೊಳಿಸಿರುವ ಯೋಜನೆಯನ್ನು 2016–17ನೇ ಸಾಲಿನಲ್ಲಿ ಯೋಜನೆಯನ್ನು ಮುಂದುವರೆಸಲಾಗಿದೆ. ಉಲ್ಲೇಖ (2)ರ ಸರ್ಕಾರದ ಆದೇಶದಲ್ಲಿ ವಿವಿಧ ಯೋಜನೆಗಳಡಿ ಒದಗಿಸಲಾದ ಆಯವ್ಯಯದಲ್ಲಿ ಮೊದಲನೇ ಕಂತಿನ ಅನುದಾನ ಬಿಡುಗಡೆ ಮಾಡಲಾಗಿದೆ.

ಉಲ್ಲೇಖ(3)ರಲ್ಲಿ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ/ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರು ಅಲ್ಪಸಂಖ್ಯಾತರ ಕಲ್ಯಾಣ ಇಲಾಖಾವತಿಯಿಂದ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ಪೂರ್ವ/ನಂತರ ವಿದ್ಯಾರ್ಥಿನಿಲಯಗಳಿಗೆ ಅತೀ ಅವಶ್ಯವಿರುವ ಸಾಮಾಗ್ರಿಗಳನ್ನು ಖರೀದಿಸಲು ರಾಜ್ಯವಲಯದ ಲೆಕ್ಕಶೀರ್ಷಿಕೆ 2225–03–277–2–64ರಡಿ ಅನುದಾನ ಬಿಡುಗಡೆ ಮಾಡಲು ಕೋರಿರುತ್ತಾರೆ.

ಪ್ರಯುಕ್ತ, ಅನುಬಂಧದಲ್ಲಿ ಲಗತ್ತಿಸಿರುವ ಅಲ್ಪಸಂಖ್ಯಾತರ ಮೆಟ್ರಿಕ್ ಪೂರ್ವ/ನಂತರ ಬಾಲಕ/ಬಾಲಕಿಯರ ವಿದ್ಯಾರ್ಥಿನಿಲಯಗಳಿಗೆ ಅವಶ್ಯವಿರುವ ತಟ್ಟೆ–ಲೋಟ, ಪಾತ್ರೆ–ಪಳಗ, ಗ್ಯಾಸ್, ಪೀಠೋಪಕರಣ ಹಾಗೂ ಇತರೆ ಅತೀ ಅವಶ್ಯವಿರುವ ಸಾಮಾಗ್ರಿಗಳನ್ನು ಖರೀದಿಸಲು ಪ್ರತಿ ವಿದ್ಯಾರ್ಥಿನಿಲಯಕ್ಕೆ ತಲಾ ರೂ.1.00 ಲಕ್ಷಗಳಂತೆ ಒಟ್ಟು ರೂ.134.00 ಲಕ್ಷ(ಒಂದು ಕೋಟಿ ಮುವತ್ತಾನಾಲ್ಕು ಲಕ್ಷ ರೂಗಳು ಮಾತ್ರ)ಗಳನ್ನು ಆಯಾ ಜಿಲ್ಲೆಯ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ/ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರಿಗೆ ಬಿಡುಗಡೆ ಮಾಡಲು ನಿರ್ಧರಿಸಿದ್ದು ಅದರಂತೆ ಈ ಆದೇಶ.

## ಆದೇಶ

**ಸಂಖ್ಯೆ: ಅಸಂನಿ/ಆ/ವಿನಿ/ಅನುದಾನ/ಸಿಆರ್–24/2016–17** **ದಿನಾಂಕ: 01.07.2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನ್ವಯ ಅನುಬಂಧದಲ್ಲಿ ಲಗತ್ತಿಸಿರುವ ಅಲ್ಪಸಂಖ್ಯಾತರ ಮೆಟ್ರಿಕ್ ಪೂರ್ವ/ನಂತರ ಬಾಲಕ/ಬಾಲಕಿಯರ ವಿದ್ಯಾರ್ಥಿನಿಲಯಗಳಿಗೆ ಅವಶ್ಯವಿರುವ ತಟ್ಟೆ–ಲೋಟ, ಪಾತ್ರೆ–ಪಳಗ, ಗ್ಯಾಸ್, ಪೀಠೋಪಕರಣ ಹಾಗೂ ಇತರೆ ಅತೀ ಅವಶ್ಯವಿರುವ ಸಾಮಾಗ್ರಿಗಳನ್ನು ಖರೀದಿಸಲು ಪ್ರತಿ ವಿದ್ಯಾರ್ಥಿನಿಲಯಕ್ಕೆ ತಲಾ ರೂ.1.00 ಲಕ್ಷಗಳಂತೆ ಒಟ್ಟು ರೂ.134.00 ಲಕ್ಷ(ಒಂದು ಕೋಟಿ ಮುವತ್ತಾನಾಲ್ಕು ಲಕ್ಷ ರೂಗಳು ಮಾತ್ರ)ಗಳನ್ನು ಆಯಾ ಜಿಲ್ಲೆಯ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ/ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರಿಗೆ ಈ ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟು ಬಿಡುಗಡೆ ಮಾಡಲಾಗಿದೆ.

ನಿಬಂಧನೆಗಳು:-

1) ಆದೇಶಲ್ಲಿ ಯಾವ ಉದ್ದೇಶಕ್ಕೆ ಅನುದಾನ ಬಿಡುಗಡೆ ಮಾಡಲಾಗಿದೆಯೋ ಆ ಉದ್ದೇಶಕ್ಕೆ ಮಾತ್ರ ಬಳಸತಕ್ಕದ್ದು. ಯಾವುದೇ ಕಾರಣಕ್ಕೂ ಅನುದಾನವನ್ನು ಮಾರ್ಗಪಲ್ಲಟ ಮಾಡುವಂತಿಲ್ಲ. ತಪ್ಪಿದ್ದಲ್ಲಿ ಮುಂದಿನ ಎಲ್ಲಾ ಆಗು ಹೋಗುಗಳಿಗೆ ತಮ್ಮನ್ನು ನೇರ ಹೊಣೆಗಾರನ್ನಾಗಿ ಮಾಡಲಾಗುವುದು.
2) ಎಲ್ಲಾ ಖರ್ಚು-ವೆಚ್ಚವನ್ನು ಕೆ.ಟಿ.ಪಿ.ಪಿ ಕಾಯ್ದೆ ಪ್ರಕಾರ ನಿಯಮಾನುಸಾರ ಖರೀದಿಸತಕ್ಕದ್ದು.
3) ಈ ಆದೇಶದಲ್ಲಿ ಬಿಡುಗಡೆ ಮಾಡಿರುವ ಅನುದಾನಕ್ಕೆ ಖರ್ಚು ಭರಿಸಿರುವ ಅನುದಾನದ ವಿವರ, (ಖಜಾನೆಯಿಂದ ಪಡೆದ 62ಬಿ ಪ್ರತಿಯೊಂದಿಗೆ) ನಿರ್ದೇಶನಾಲಯಕ್ಕೆ ಸಲ್ಲಿಸತಕ್ಕದ್ದು.
4) ಬಿಡುಗಡೆ ಮಾಡಿರುವ ಅನುದಾನ ವ್ಯಪಗತವಾಗದಂತೆ ಕೂಡಲೇ ಕ್ರಮವಹಿಸತಕ್ಕದ್ದು ಹಾಗೂ ದಿನಾಂಕ: 31.03.2017 ರೊಳಗೆ ವೆಚ್ಚಮಾಡತಕ್ಕದ್ದು.

ಇದಕ್ಕೆ ತಗಲುವ ವೆಚ್ಚವನ್ನು ಲೆಕ್ಕಶೀರ್ಷಿಕೆ 2225-03-277-2-64 ಆಬ್ಜೆಕ್ಟ್ ಕೋಡ್ (059) ನೂತನ ಹಾಸ್ಟೆಲ್‌ಗಳ ಪ್ರಾರಂಭ ರಾಜ್ಯವಲಯ ಯೋಜನೆಯಡಿ 2016-17ನೇ ಸಾಲಿನಲ್ಲಿ ಒದಗಿಸಲಾದ ಆಯವ್ಯಯದಲ್ಲಿ ಭರಿಸತಕ್ಕದ್ದು.

(ಅಕ್ರಂ ಪಾಷ)
ನಿರ್ದೇಶಕರು,
ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ
ಬೆಂಗಳೂರು.

ಪ್ರತಿಯನ್ನು:-

1. ಕರ್ನಾಟಕ ಮಹಾಲೇಖಪಾಲರು, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವೆಚ್ಚ-3, ಬೆಂಗಳೂರು
4. ಉಪ ನಿರ್ದೇಶಕರು, ಖಜಾನೆ ಗಣಕೀಕರಣ ನೆಟ್‌ವರ್ಕ್ ವಿಭಾಗ, ಖನಿಜ ಭವನ, ಬೆಂಗಳೂರು ರವರಿಗೆ ಗಣಕೀಕರಿಸಲು ಕೋರಿದೆ.
5. ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾಧಿಕಾರಿಗಳು.
6. ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ/ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ.
7. ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾ ಖಜಾನಾಧಿಕಾರಿಗಳು,
8. ಲೆಕ್ಕಪತ್ರ ಶಾಖೆ.
9. ಕೇಂದ್ರ ಕಛೇರಿ.
10. ಹೆಚ್ಚುವರಿ

F:\Chaithra\2016-17\AD SIR\Release Order.docx